# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿಗೆ ಸಂಬಂಧಿಸಿದಂತೆ ವಾರ್ಡ್ ಸಮಿತಿಯ ಸಭೆಯನ್ನು ದಿನಾಂಕ: 06-06-2022 ರಂದು ಆಯೋಜಿಸಿದ್ದು, ಸದರಿ ವಾರ್ಡ್ ಸಮಿತಿ ಸಭೆಯ ನಡವಳಿಗಳು**

1. ಶ್ರೀ ನಾಗಪ್ಪ ಕಮತಿ (ನೋಡಲ್ ಅಧಿಕಾರಿ)
2. ಶ್ರೀ ಎಸ್. ರಾಜನ್ (ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು)
3. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು,
4. ಶ್ರೀ ಎಸ್.ಎ ರೆಹಮಾನ್, ವಾಟರ್ ಇನ್ಸ್‌ಪೆಕ್ಟರ್, ಬಿ.ಡ.ಬ್ಲ್ಯೂ.ಎಸ್.ಎಸ್.ಬಿ ಇಲಾಖೆ,
5. ಶ್ರೀಮತಿ ಶ್ರೀಲಕ್ಷ್ಮಿ, ಕಿರಿಯ ಆರೋಗ್ಯ ನಿರೀಕ್ಷಕರು,
6. ಶ್ರೀ ಶ್ರೀನಿವಾಸ್, ಕಂದಾಯ ನಿರೀಕ್ಷಕರು,
7. ಶ್ರೀ ಜೋಶ್ವಾ, ಕರ ವಸೂಲಿಗಾರರು,
8. ಶ್ರೀ ಗಿರೀಶ್ ಯಾದವ್, ಸ್ಥಳೀಯರು,
9. ಶ್ರೀ ಮುರುಳಿ, ಸ್ಥಳೀಯರು,
10. ಶ್ರೀ ಕೆಂಪರಾಜ್, ಸ್ಥಳೀಯರು,
11. ಶ್ರೀ ಕುಮಾರ್, ಸ್ಥಳೀಯರು,

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

1) **ಶ್ರೀ ಕುಮಾರ್ ರವರು ಮಾತನಾಡಿ:-**

- ಕಮ್ಮನಹಳ್ಳಿ ವಾರ್ಡ್ ವ್ಯಾಪ್ತಿಯ ಜಾನಕಿರಾಮ್ ಮುಖ್ಯರಸ್ತೆಯನ್ನು ಡಾಂಬರೀಕರಣ ಮಾಡಬೇಕು, ಮಾರುತಿ ಶಾಲೆಯ ಮುಂಭಾಗದಲ್ಲಿರುವ ಆಟದ ಮೈದಾನವನ್ನು ಅಭಿವೃದ್ಧಿಪಡಿಸಬೇಕು
- ಜಾನಕಿರಾಮ್ ಲೇಔಟ್ ಸುತ್ತಮುತ್ತಲಿನ ಪ್ರದೇಶದಲ್ಲಿ ದ್ವಿ ಚಕ್ರ ವಾಹನಗಳ ಕಳ್ಳತನ ಹೆಚ್ಚಾಗಿದ್ದು, ಈ ಪ್ರದೇಶದಲ್ಲಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸಲು ಸಭೆಗೆ ತಿಳಿಸಿದರು.

2) **ಶ್ರೀ ಕೆಂಪರಾಜ್, ಸ್ಥಳೀಯರು ರವರು ಮಾತನಾಡಿ**

- ಸದಾಶಿವ ದೇವಸ್ಥಾನ ರಸ್ತೆ, 8ನೇ ಮತ್ತು 10ನೇ ಅಡ್ಡರಸ್ತೆಯು ತುಂಬಾ ಹಾಳಾಗಿದ್ದು, ಸ್ಥಳೀಯ ಸಾರ್ವನಿಕರಿಗೆ ತೊಂದರೆಯಾಗಿದ್ದು, ಕೂಡಲೇ ಕಾಂಕ್ರೀಟ್ ರಸ್ತೆಯನ್ನು ನಿರ್ಮಾಣ ಮಾಡಲು ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಲಾಗಿದ್ದು, ಇತ್ತೀಚೆಗೆ ಸದರಿ ರಸ್ತೆಯಲ್ಲಿ ಕಾಂಕ್ರೀಟ್ ರಸ್ತೆಯನ್ನು ನಿರ್ಮಾಣ ಮಾಡಿರುವುದರಿಂದ ಪಾಲಿಕೆ ಅಧಿಕಾರಿಗಳಿಗೆ ಅಭಿನಂದನೆ ಸಲ್ಲಿಸಲಾಯಿತು.

3) **ಶ್ರೀ ಮುರುಳಿ, ಸ್ಥಳೀಯರು, ರವರು ಮಾತನಾಡಿ**

- ಕಮ್ಮನಹಳ್ಳಿ ವಾರ್ಡ್ ವ್ಯಾಪ್ತಿಯ ಕಮ್ಮನಹಳ್ಳಿ ಮುಖ್ಯರಸ್ತೆಯ ಐ.ಓ.ಸಿ ಫ್ಲೈ ಓವರ್ ಹತ್ತಿರ, ಮಳೆ ಬಂದಾಗ ದಕ್ಷಿಣ ಕಡೆಯಲ್ಲಿ ನೀರು ಶೇಖರಣೆಯಾಗಿ ವಾಹನ ಸವಾರರಿಗೆ ತುಂಬಾ

ತೊಂದರೆಯಾಗುತ್ತಿದ್ದು, ಈ ಬಗ್ಗೆ ಬೃಹತ್ ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗದ ವತಿಯಿಂದ ಹೊಸದಾಗಿ ಚರಂಡಿಯನ್ನು ಅಭಿವೃದ್ಧಿ ಪಡಿಸಲು ಸಭೆಗೆ ತಿಳಿಸಿದರು.

4) **ಶ್ರೀ ಗಿರೀಶ್ ಯಾದವ್, ಸ್ಥಳೀಯರು, ರವರು ಮಾತನಾಡಿ**

- ಕಮ್ಮನಹಳ್ಳಿ ವಾರ್ಡ್ ವ್ಯಾಪ್ತಿಯ ಅನೇಕ ರಸ್ತೆಗಳಲ್ಲಿ ಹೂಳು ಯತೇಚ್ಛವಾಗಿ ಬಿದ್ದಿದ್ದು ಇದನ್ನು ಆಗಿಂದ್ದಾಗ್ಗೆ ತೆರವುಗೊಳಿಸಬೇಕಾಗಿರುವುದಾಗಿ ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಲಾಗಿದ್ದು, ಸಿಲ್ಟ್ ಅಂಡ್ ಟ್ರಾಕ್ಟರ್ ಕಾಮಗಾರಿಯನ್ನು ನಿರ್ವಹಿಸಲು ಪ್ರಸ್ತುತ ಟೆಂಡರ್ ಪ್ರಕಿಯೆಯ ಪ್ರಗತಿಯ ಬಗ್ಗೆ ಸಭೆಯಲ್ಲಿ ಮತ್ತೊಮ್ಮೆ ಪ್ರಸ್ತಾಪಿಸಲಾಯಿತು.
- ಕಮ್ಮನಹಳ್ಳಿ ವ್ಯಾಪ್ತಿಯ ಜಯಲಕ್ಷ್ಮಿ ಶಾಲೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ದ್ವಿ ಚಕ್ರ ವಾಹನಗಳ ಕಳ್ಳತನ ಹೆಚ್ಚಾಗಿದ್ದು, ಈ ಪ್ರದೇಶದಲ್ಲಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸಲು ಸಭೆಗೆ ತಿಳಿಸಿದರು.

ನೋಡೆಲ್ ಅಧಿಕಾರಿ ರವರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ವಿಷಯಗಳ ಬಗ್ಗೆ ಆಯಾ ಇಲಾಖೆಯ ಅಧಿಕಾರಿ / ನೌಕರರುಗಳು ಕ್ರಮ ಕೈಗೊಳ್ಳಲು ಸಭೆಗೆ ತಿಳಿಸಿದರು.

**ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿ,**

**ನೋಡೆಲ್ ಅಧಿಕಾರಿ**
**ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿ**

**ಪ್ರತಿಯನ್ನು**

1) ಕಾರ್ಯಪಾಲಕ ಅಭಿಯಂತರರು, ಸರ್ವಜ್ಞನಗರ ವಿಭಾಗ, ಬಿ.ಬಿ.ಎಂ.ಪಿ
2) ಕಾರ್ಯಪಾಲಕ ಅಭಿಯಂತರರು, ಯೋಜನೆ (ಪೂರ್ವ ವಲಯ) ಬಿ.ಬಿ.ಎಂ.ಪಿ
3) ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಪೂರ್ವ ವಲಯ) ಬಿ.ಬಿ.ಎಂ.ಪಿ
4) ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
5) ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ
6) ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು, ಬಿ.ಬಿ.ಎಂ.ಪಿ
7) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ಬಿ.ಬಿ.ಎಂ.ಪಿ
8) ತೋಟಗಾರಿಕಾ ಅಧೀಕ್ಷಕರು, (ಪೂರ್ವ ವಲಯ)
9) ಆರೋಗ್ಯ ವೈದ್ಯಾಧಿಕಾರಿಗಳು, (ಪೂರ್ವ ವಲಯ)
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣಾ ವಿಭಾಗ
11) ಸಹಾಕಯ ಕಂದಾಯ ಅಧಿಕಾರಿ. ಮಾರುತಿ ಸೇವಾ ನಗರ ಉಪವಿಭಾಗ
12) ಕಲ್ಯಾಣಾದಿಕಾರಿಗಳು, (ಪೂರ್ವ ವಲಯ) ಬಿ.ಬಿ.ಎಂ.ಪಿ
13) ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, (ಪೂರ್ವ ವಲಯ) ಬಿ.ಬಿ.ಎಂ.ಪಿ
14) ಪೋಲಿಸ್ ಇನ್ಸ್‌ಪೆಕ್ಟರ್ ಬಾಣಸವಾಡಿ.
15) ಪೋಲಿಸ್ ಇನ್ಸ್‌ಪೆಕ್ಟರ್ (ಸಂಚಾರಿ), ಬಾಣಸವಾಡಿ.
16) ಕಛೇರಿ ಪ್ರತಿ.